**Akashvani : Bangalore**
**National Bulletin In Kannada**
**17.01.2025 / 19.35 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**17.01.2025 / 19.35 hrs**

**<><*<><>*><>**

<u>ಮುಖ್ಯಾಂಶಗಳು</u>

೧. ಸೈನಿಕರ ದೇಶಭಕ್ತಿ, ಶೌರ್ಯ ಮತ್ತು ಶಿಸ್ತು - ದೇಶದ ರಕ್ಷಣೆಗೆ ಪೂರಕ - ಕೇಂದ್ರ ಸಚಿವ ರಾಜ್‌ನಾಥ್ ಸಿಂಗ್

೨. ಕೇಂದ್ರ ಸಚಿವ ಡಾ. ಎಲ್. ಮುರುಗನ್ ಜಾರ್ಖಂಡ್ ಪ್ರವಾಸ - ಜಗನ್ನಾಥಪುರದ ಐಟಿಐಗೆ ಭೇಟಿ

೩. ಸಿಂಗಾಪುರ ಅಧ್ಯಕ್ಷ ಥರ್ಮನ್ ಷಣ್ಮುಗರತ್ನಂ ಒಡಿಶಾದ ಭುವನೇಶ್ವರಕ್ಕೆ ಆಗಮನ

೪. ಆರ್‌ಐಎನ್‌ಎಲ್‌ನ ಪುನರುಜ್ಜೀವನಕ್ಕಾಗಿ ೧೧ ಸಾವಿರದ ೪೪೦ ಕೋಟಿ ರೂಪಾಯಿಗಳ ಪ್ಯಾಕೇಜ್‌ಗೆ ಆರ್ಥಿಕ ವ್ಯವಹಾರಗಳ ಸಂಪುಟ ಸಮಿತಿ, ಅನುಮೋದನೆ

೫. ದೆಹಲಿ ವಿಧಾನಸಭೆ ಚುನಾವಣೆಗೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಇಂದು ಮುಕ್ತಾಯ

**<><*<><>*><>**

ರಕ್ಷಣಾ ಮತ್ತು ಭದ್ರತಾ ವಲಯದಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆಯನ್ನು ಗಮನದಲ್ಲಿಟ್ಟುಕೊಂಡು ದೇಶದ ಆಕ್ರಮಣಕಾರಿ ಮತ್ತು ರಕ್ಷಣಾತ್ಮಕ ಪ್ರತಿಕ್ರಿಯೆಗಳನ್ನು ಬಲಪಡಿಸುವ ಅಗತ್ಯವನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಒತ್ತಿ ಹೇಳಿದ್ದಾರೆ. ದೇಶದ ರಕ್ಷಣಾ ಪಡೆಗಳ ಸಂಕೀರ್ಣತೆಗಳು ಕಾಲಕ್ರಮೇಣ ಹೆಚ್ಚುತ್ತಿವೆ , ೨೦೨೪ ಅನ್ನು ನೌಕಾ ನಾಗರಿಕರ ವರ್ಷವನ್ನಾಗಿ ಆಚರಿಸಲು ನವದೆಹಲಿಯಲ್ಲಿ ಇಂದು ಆಯೋಜಿಸಲಾದ ಕಾರ್ಯಕ್ರಮವನ್ನುದ್ದೇಶಿಸಿ ಅವರು ಮಾತನಾಡಿದರು. ನಮ್ಮ ಮಿಲಿಟರಿ ದೊಡ್ಡ ಜನಾದೇಶ ಮತ್ತು ಸಂಕೀರ್ಣ ರಚನೆಯೊಂದಿಗೆ ಮುಂದುವರಿಯುತ್ತಿದೆ , ದೇಶಭಕ್ತಿ, ಶೌರ್ಯ ಮತ್ತು ಶಿಸ್ತು - ಸೈನಿಕರಿಗೆ ಬೆದರಿಕೆಗಳು ಮತ್ತು ಸವಾಲುಗಳಿಂದ ದೇಶವನ್ನು ರಕ್ಷಿಸುವ ಜವಾಬ್ದಾರಿಯನ್ನು ಪೂರೈಸಲು ಸಹಾಯ ಮಾಡುತ್ತದೆ ಎಂದು ಅವರು ಪ್ರತಿಪಾದಿಸಿದರು. ರಾಷ್ಟ್ರದ ಆರ್ಥಿಕ ಸಮೃದ್ಧಿಯು ಕಡಲ ಭದ್ರತೆಗೆ ಸಂಬಂಧಿಸಿದೆ ಮತ್ತು ಪ್ರಾದೇಶಿಕ ಜಲಪ್ರದೇಶಗಳನ್ನು ರಕ್ಷಿಸುವುದು, ಸಂಚರಣೆಗೆ ಸ್ವಾತಂತ್ರ್ಯವನ್ನು ಖಚಿತಪಡಿಸಿಕೊಳ್ಳುವುದು ಮತ್ತು ಸಮುದ್ರ ಮಾರ್ಗಗಳನ್ನು ನಿರ್ವಹಿಸುವುದು ಅಗತ್ಯವಾಗಿದೆ ಎಂದು ಅವರು ಹೇಳಿದರು. ಇಂದಿನ ಕಾಲದಲ್ಲಿ ಕಡಲ ಭದ್ರತೆಯ ಪ್ರಮುಖ ಅಂಶವೆಂದರೆ ಸೈಬರ್ ಭದ್ರತೆ ಎಂದು ಸಚಿವರು ವಿವರಿಸಿದರು, ಸೈಬರ್ ದಾಳಿಯನ್ನು ನಿರ್ಲಕ್ಷಿಸುವುದು ಮಾರಕವಾಗಬಹುದು ಎಂದು ಅವರು ಈ ಸಂದರ್ಭದಲ್ಲಿ ಹೇಳಿದರು.

**<><*<><>*><>**

ಜಾರ್ಖಂಡ್ ಪ್ರವಾಸದಲ್ಲಿರುವ ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ. ಎಲ್. ಮುರುಗನ್ ಅವರು ಇಂದು ಪಶ್ಚಿಮ ಸಿಂಗ್ಭೂಮ್ ಜಿಲ್ಲೆಯಲ್ಲಿ ಮಹತ್ವಾಕಾಂಕ್ಷೆಯ ಜಿಲ್ಲಾ ಯೋಜನೆಯನ್ನು ಪರಿಶೀಲಿಸಿದರು. ತಮ್ಮ ಮೂರು ದಿನಗಳ ಭೇಟಿಯ ಎರಡನೇ ದಿನದಂದು, ಸಚಿವರು ಜಗನ್ನಾಥಪುರದ ಐಟಿಐಗೆ ಭೇಟಿ ನೀಡಿ ಪರಿಶೀಲಿಸಿದರು. ಅವರು ಕೇಜ್ ಮೀನುಗಾರಿಕೆ-ಕರಂಜಿಯಾಕ್ಕೂ ಭೇಟಿ ನೀಡಿದರು. ತಮ್ಮ ಭೇಟಿಯ ಸಮಯದಲ್ಲಿ, ಸಚಿವರು ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ, ನಮ್ಮ ದೇಶವು ಪ್ರತಿಯೊಂದು

ವಲಯದಲ್ಲೂ ಪ್ರಗತಿ ಸಾಧಿಸುತ್ತಿದೆ. ಅಭಿವೃದ್ಧಿ ಹೊಂದಿದ ಭಾರತದ ಗುರಿಯನ್ನು ಸಾಧಿಸುವತ್ತ ನಾವು ವೇಗವಾಗಿ ಸಾಗುತ್ತಿದ್ದೇವೆ ಎಂದು ಅವರು ಒತ್ತಿ ಹೇಳಿದರು.

**<><*<><>*><>**

ಸಿಂಗಾಪುರ ಅಧ್ಯಕ್ಷ ಥರ್ಮನ್ ಷಣ್ಮುಗರತ್ನಂ ಅವರು ಎರಡು ದಿನಗಳ ಒಡಿಶಾ ಭೇಟಿಗಾಗಿ ಇಂದು ಬೆಳಿಗ್ಗೆ ಭುವನೇಶ್ವರಕ್ಕೆ ಆಗಮಿಸಿದರು. ಒಡಿಶಾ ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ ಅವರು ಸಿಂಗಾಪುರ ಅಧ್ಯಕ್ಷರನ್ನು ಬಿಜು ಪಟ್ನಾಯಕ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಸ್ವಾಗತಿಸಿದರು. ಈ ತಿಂಗಳ ೨೮ ಮತ್ತು ೨೯ ರಂದು ನಿಗದಿಯಾಗಿರುವ ’ಉತ್ಕರ್ಷ್ ಒಡಿಶಾ: ಮೇಕ್-ಇನ್-ಒಡಿಶಾ ಸಮಾವೇಶ’ಕ್ಕೂ ಮುನ್ನ ಸಿಂಗಾಪುರ ಅಧ್ಯಕ್ಷರ ಭೇಟಿ ಮಹತ್ವವನ್ನು ಪಡೆದಿದೆ. ಸಚಿವರ ಜೊತೆ ಸಂಸತ್ ಸದಸ್ಯರು ಮತ್ತು ಅಧಿಕಾರಿಗಳು ಸೇರಿದಂತೆ ಉನ್ನತ ಮಟ್ಟದ ನಿಯೋಗ ಅವರೊಂದಿಗೆ ಬಂದಿದೆ. "ಇಂದು ಸಿಂಗಾಪುರದ ಅಧ್ಯಕ್ಷ ಥರ್ಮನ್ ಷಣ್ಮುಗರತ್ನಂ ಅವರು ಒಡಿಶಾದಲ್ಲಿ, ವಿಶೇಷವಾಗಿ ಸೆಮಿಕಂಡಕ್ಟರ್ ಉದ್ಯಮಕ್ಕೆ ಕೌಶಲ್ಯ ಅಭಿವೃದ್ಧಿ ಪರಿಸರ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲು ತಾಂತ್ರಿಕ ಮತ್ತು ವೃತ್ತಿಪರ ಶಿಕ್ಷಣ ಮತ್ತು ತರಬೇತಿಯಲ್ಲಿ ಸಹಕಾರವನ್ನು ವಿಸ್ತರಿಸಲು ಪ್ರಯತ್ನಿಸುವ ಒಪ್ಪಂದಕ್ಕೆ ಸಹಿ ಹಾಕಲಿದ್ದಾರೆ. ಒಡಿಶಾದ ಕೈಗಾರಿಕಾ ಅಭಿವೃದ್ಧಿ ನಿಗಮ ಮತ್ತು ಸಿಂಗಾಪುರದ ಸೆಂಬ್‌ಕಾರ್ಪ್ ನಡುವೆ ಮತ್ತೊಂದು ಒಪ್ಪಂದಕ್ಕೆ ಸಹಿ ಹಾಕಲಾಗುವುದು. ಹೊಸ ನಗರದ ಅಭಿವೃದ್ಧಿಗಾಗಿ ಭುವನೇಶ್ವರ ಅಭಿವೃದ್ಧಿ ಪ್ರಾಧಿಕಾರ ಮತ್ತು ಸಿಂಗಾಪುರದ ಸುರ್ಬಾನಾ ಜುರಾಂಗ್ ನಡುವೆ ಒಪ್ಪಂದಕ್ಕೆ ಸಹಿ ಹಾಕಲಾಗುವುದು. ಸಿಂಗಾಪುರ ಅಧ್ಯಕ್ಷರ ಭೇಟಿಯ ಸಮಯದಲ್ಲಿ ಸೆಮಿಕಂಡಕ್ಟರ್ ವಲಯದಲ್ಲಿ ಕೌಶಲ್ಯ ಅಭಿವೃದ್ಧಿಗಾಗಿ, ಹಸಿರು ಹೈಡ್ರೋಜನ್ ಕಾರಿಡಾರ್‌ಗಾಗಿ ಮತ್ತು ಪೆಟ್ರೋಕೆಮಿಕಲ್ ಹಾಗೂ ಪೆಟ್ರೋಲಿಯಂ ಹೂಡಿಕೆ ಪ್ರದೇಶದ ಅಭಿವೃದ್ಧಿಗಾಗಿ ಒಪ್ಪಂದಗಳಿಗೆ ಸಹಿ ಹಾಕಲಾಗುವುದು. ಅವರು ನಾಳೆ ಭುವನೇಶ್ವರದ ಹೊರವಲಯದಲ್ಲಿರುವ ಅಂಧರುವಾದಲ್ಲಿರುವ ಲಸಿಕೆ ಉತ್ಪಾದನಾ ಘಟಕಕ್ಕೆ ಭೇಟಿ ನೀಡಲಿದ್ದಾರೆ.

**<><*<><>*><>**

Rashtriya Ispat Nigam Limited - ಆರ್‌ಐಎನ್‌ಎಲ್‌ನ ಪುನರುಜ್ಜೀವನಕ್ಕಾಗಿ ೧೧ ಸಾವಿರದ ೪೪೦ ಕೋಟಿ ರೂಪಾಯಿಗಳ ಪ್ಯಾಕೇಜ್‌ಗೆ ಆರ್ಥಿಕ ವ್ಯವಹಾರಗಳ ಸಂಪುಟ ಸಮಿತಿ, ಸಿಸಿಇಎ ಅನುಮೋದನೆ ನೀಡಿದೆ ಎಂದು ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಮಾಹಿತಿ ನೀಡಿದ್ದಾರೆ. ನವದೆಹಲಿಯಲ್ಲಿ ಮಾಧ್ಯಮದೊಂದಿಗೆ ಮಾತನಾಡಿದ ಅವರು ನಿನ್ನೆಯ ಸಂಪುಟ ಸಭೆಯಲ್ಲಿ ಪುನರುಜ್ಜೀವನ ಪ್ಯಾಕೇಜ್‌ಗೆ ಅನುಮೋದನೆ ನೀಡಲಾಗಿದೆ. ಆಂಧ್ರಪ್ರದೇಶದಲ್ಲಿರುವ ಆರ್‌ಐಎನ್‌ಎಲ್ ದೇಶದ ಉಕ್ಕಿನ ವಲಯದಲ್ಲಿ ಪ್ರಮುಖ ಕಂಪನಿಯಾಗಿದೆ ಎಂದು ಅವರು ಹೇಳಿದರು. ಈ ಪ್ಯಾಕೇಜ್‌ನ ಸಹಾಯದಿಂದ ಆರ್‌ಐಎನ್‌ಎಲ್‌ನ ಎಲ್ಲಾ ಉದ್ಯೋಗಿಗಳು ಹಾಗೂ ಆರ್ಥಿಕ ಚಟುವಟಿಕೆಗಳೊಂದಿಗೆ ಸಂಪರ್ಕ ಹೊಂದಿದ ಎಲ್ಲರಿಗೂ ಪ್ರಯೋಜನವಾಗಲಿದೆ ಎಂದು ಸಚಿವರು ಹೇಳಿದರು.

**ಧ್ವನಿ: ಅಶ್ವಿನಿ ವೈಷ್ಣವ್ ಕೇಂದ್ರ ಸಚಿ**

**<><*<><>*><>**

ದೆಹಲಿ ವಿಧಾನಸಭೆ ಚುನಾವಣೆಗೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಇಂದು ಕೊನೆಗೊಂಡಿದೆ. ೭೦ ಸದಸ್ಯರ ವಿಧಾನಸಭೆಗೆ ಸಾವಿರಕ್ಕೂ ಹೆಚ್ಚು ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ. ನಾಮಪತ್ರ ಸಲ್ಲಿಕೆಯ ಕೊನೆಯ ದಿನವಾದ ಇಂದು ಬಿಜೆಪಿಯ ಶಿಖಾ ರೈ ಮತ್ತು ನೀರಜ್ ಬಸೋಯಾ ನಾಮಪತ್ರ ಸಲ್ಲಿಸಿದ್ದಾರೆ. ಆಮ್ ಆದ್ಮಿ ಪಕ್ಷದ ಅವಧ್ ಓಜಾ, ರಾಖಿ ಬಿಡ್ಲಾನ್ ಮತ್ತು ಬಂದನಾ ಕುಮಾರಿ ಸೇರಿದಂತೆ ಇತರರು ನಾಮಪತ್ರ ಸಲ್ಲಿಸಿದ್ದಾರೆ. ಸೋಮವಾರ

ಉಮೇದುವಾರಿಕೆ ಹಿಂಪಡೆಯಲು ಕೊನೆಯ ದಿನಾಂಕವಾಗಿದೆ. ನಾಮನಿರ್ದೇಶನ ಅಂತ್ಯಗೊಂಡ ನಂತರ, ಆಮ್ ಆದ್ಮಿ ಪಕ್ಷ, ಬಿಜೆಪಿ, ಕಾಂಗ್ರೆಸ್ ಹಾಗೂ ಸಣ್ಣ ಪಕ್ಷಗಳು ಮತ್ತು ಸ್ವತಂತ್ರ ಅಭ್ಯರ್ಥಿಗಳು ಪಾದಯಾತ್ರೆಗಳು ಮತ್ತು ಮನೆ-ಮನೆ ಸಭೆಗಳನ್ನು ನಡೆಸುವ ಮೂಲಕ ತಮ್ಮ ಪ್ರಚಾರವನ್ನು ತೀವ್ರಗೊಳಿಸಿದ್ದಾರೆ. ಹಿರಿಯ ಬಿಜೆಪಿ ನಾಯಕ ಅನುರಾಗ್ ಸಿಂಗ್ ಠಾಕೂರ್ ಪಕ್ಷದ ಸಂಸದ ಬನ್ಸುರಿ ಸ್ವರಾಜ್ ಮತ್ತು ಹಲವಾರು ದೆಹಲಿ ಬಿಜೆಪಿ ನಾಯಕರು ಪಕ್ಷದ ಅಭ್ಯರ್ಥಿಗಳ ಪರವಾಗಿ ನಗರದ ವಿವಿಧ ಭಾಗಗಳಲ್ಲಿ ಪ್ರಚಾರ ನಡೆಸಿದರು. ಹಿರಿಯ ಎಎಪಿ ನಾಯಕ ಮತ್ತು ಪಂಜಾಬ್ ಮುಖ್ಯಮಂತ್ರಿ ಭಗವಂತ್ ಮಾನ್ ಮತ್ತು ಇತರ ಆಮ್ ಆದ್ಮಿ ಪಕ್ಷದ ನಾಯಕರು ಕೂಡ ರಾಷ್ಟ್ರ ರಾಜಧಾನಿಯಲ್ಲಿ ರೋಡ್ ಶೋಗಳು ಮತ್ತು ಪಾದಯಾತ್ರೆಗಳನ್ನು ಆಯೋಜಿಸಿದ್ದರು.

<><*<><>*><>

ಈ ತಿಂಗಳ ೨೯ ರಂದು ಪ್ರಯಾಗರಾಜ್‌ನಲ್ಲಿ ನಡೆಯುವ ಮಹಾಕುಂಭದಲ್ಲಿ ಮೌನಿ ಅಮವಾಸ್ಯೆಯ ಅಮೃತ ಸ್ನಾನಕ್ಕಾಗಿ ಸರ್ಕಾರ ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿದೆ. ತ್ರಿವೇಣಿ ಸಂಗಮದಲ್ಲಿ ಮೌನಿ ಅಮವಾಸ್ಯೆಯಂದು ಎಂಟು ಕೋಟಿಗೂ ಹೆಚ್ಚು ಭಕ್ತರು ಮತ್ತು ಯಾತ್ರಿಕರು ಪವಿತ್ರ ಸ್ನಾನ ಮಾಡುವ ನಿರೀಕ್ಷೆಯಿದೆ. ವ್ಯವಸ್ಥೆಗಳನ್ನು ಬಲಪಡಿಸಲು, ಮುಖ್ಯ ಕಾರ್ಯದರ್ಶಿ ಮನೋಜ್ ಕುಮಾರ್ ಸಿಂಗ್ ಮತ್ತು ಡಿಜಿಪಿ ಪ್ರಶಾಂತ್ ಕುಮಾರ್ ನಿನ್ನೆ ಮಹಾಕುಂಭ ಪ್ರದೇಶಕ್ಕೆ ಭೇಟಿ ನೀಡಿ ಇಂಟಿಗ್ರೇಟೆಡ್ ಕಮಾಂಡ್ ಮತ್ತು ಕಂಟ್ರೋಲ್ ಸೆಂಟರ್‌ನಲ್ಲಿ ಉನ್ನತ ಮಟ್ಟದ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದರು.

<><*<><>*><>

ಬಾಲಿವುಡ್ ನಟ ಸೈಫ್ ಅಲಿ ಖಾನ್ ಮೇಲಿನ ಹಲ್ಲೆ ಪ್ರಕರಣಕ್ಕೆ ಸಂಬಂಧ ಪಟ್ಟಂತೆ ಮುಂಬೈ ಪೊಲೀಸರು ಓರ್ವ ವ್ಯಕ್ತಿಯನ್ನು ಬಂಧಿಸಿ ಹೆಚ್ಚಿನ ತನಿಖೆಗಾಗಿ ಬಾಂದ್ರಾ ಪೊಲೀಸ್ ಠಾಣೆಗೆ ಕರೆದೊಯ್ದಿದ್ದಾರೆ. ಈ ನಡುವೆ ಲೀಲಾವತಿ ಆಸ್ಪತ್ರೆಯ ವೈದ್ಯರ ಪ್ರಕಾರ, ಸೈಫ್ ಅಲಿ ಖಾನ್ ಚೇತರಿಸಿಕೊಳ್ಳುತ್ತಿದ್ದಾರೆ ಮತ್ತು ತೀವ್ರ ನಿಗಾ ಘಟಕದಿಂದ ಸ್ಥಳಾಂತರಿಸಲಾಗಿದೆ. ಅವರ ಕುಟುಂಬದ ಸದಸ್ಯರು, ಸೇರಿದಂತೆ ಇತರರು ಆಸ್ಪತ್ರೆಯಲ್ಲಿ ಸೈಫ್ ಅಲಿ ಖಾನ್ ಅವರನ್ನು ಭೇಟಿಯಾಗಿದ್ದಾರೆ.

<><*<><>*><>

ಪುಣೆ-ನಾಸಿಕ್ ಹೆದ್ದಾರಿಯಲ್ಲಿ ಇಂದು ಬೆಳಿಗ್ಗೆ ನಡೆದ ಅಪಘಾತದಲ್ಲಿ ಟೆಂಪೋವೊಂದು ಮಿನಿವ್ಯಾನ್‌ಗೆ ಡಿಕ್ಕಿ ಹೊಡೆದು, ನಂತರ ನಿಂತಿದ್ದ ಬಸ್‌ಗೆ ಡಿಕ್ಕಿ ಹೊಡೆದ ಪರಿಣಾಮ ಕನಿಷ್ಠ ಒಂಬತ್ತು ಜನರು ಸಾವನ್ನಪ್ಪಿದ್ದಾರೆ. ಮೃತಪಟ್ಟವರಲ್ಲಿ ೪ ಮಹಿಳೆಯರು, ನಾಲ್ವರು ಪುರುಷರು ಹಾಗೂ ಒಂದು ಮಗು ಸೇರಿದೆ. ಈ ಘಟನೆ ಇಂದು ಬೆಳಿಗ್ಗೆ ೧೦ ಗಂಟೆ ಸುಮಾರಿಗೆ ನಾರಾಯಣಗಾಂವ್ ಬಳಿ ನಡೆದಿದೆ. ನಾರಾಯಣಗಾಂವ್ ಕಡೆಗೆ ಹೋಗುತ್ತಿದ್ದ ಮಿನಿವ್ಯಾನ್‌ಗೆ ಹಿಂದಿನಿಂದ ಟೆಂಪೋ ಡಿಕ್ಕಿ ಹೊಡೆದ ಪರಿಣಾಮ ರಸ್ತೆಬದಿಯಲ್ಲಿ ನಿಲ್ಲಿಸಿದ್ದ ಖಾಲಿ ಬಸ್‌ಗೆ ಡಿಕ್ಕಿ ಹೊಡೆದಿದೆ ಎಂದು ಪುಣೆ ಗ್ರಾಮೀಣ ಪೊಲೀಸ್ ವರಿಷ್ಠಾಧಿಕಾರಿ ಪಂಕಜ್ ದೇಶಮುಖ್ ತಿಳಿಸಿದ್ದಾರೆ.

<><*<><>*><>

ಗ್ರಾಹಕರಿಗೆ ಅಗತ್ಯ ಆಹಾರ ಪದಾರ್ಥಗಳನ್ನು ಕೈಗೆಟುಕುವ ದರದಲ್ಲಿ ಲಭ್ಯವಾಗಿಸಲು ಮತ್ತು ಸ್ಥಿರ ಬೆಲೆಗಳನ್ನು ಕಾಯ್ದುಕೊಳ್ಳಲು ಕೇಂದ್ರವು ಅಗತ್ಯ ಆಹಾರ ಪದಾರ್ಥಗಳ ಬೆಲೆಗಳು ಮತ್ತು ಲಭ್ಯತೆಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದೆ. ಅಗತ್ಯ ಆಹಾರ ಪದಾರ್ಥಗಳ ಲಭ್ಯತೆ ಮತ್ತು ಕೈಗೆಟುಕುವಿಕೆಯನ್ನು ಖಚಿತಪಡಿಸಿಕೊಳ್ಳಲು ದೇಶೀಯ ಉತ್ಪಾದನೆಯನ್ನು ಪ್ರೋತ್ಸಾಹಿಸುವಂತಹ ಹಲವಾರು ಕ್ರಮಗಳನ್ನು ಸರ್ಕಾರ ತೆಗೆದುಕೊಂಡಿದೆ ಎಂದು ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವಾಲಯ ತಿಳಿಸಿದೆ.

<><*<><>*><>

ಕೆನಡಾದ ನೇಪಿಯನ್‌ನ ಭಾರತೀಯ ಮೂಲದ ಸಂಸತ್ ಸದಸ್ಯ ಚಂದ್ರ ಆರ್ಯ ಅವರು ನಾಮಪತ್ರ ಸಲ್ಲಿಸಿ ಕನ್ನಡದಲ್ಲಿ ಸದನವನ್ನು ಉದ್ದೇಶಿಸಿ ಮಾತನಾಡಿದ ನಂತರ ಕೆನಡಾದ ಪ್ರಧಾನಿ ಹುದ್ದೆಗೆ ಅಧಿಕೃತವಾಗಿ ಸ್ಪರ್ಧಿಸಿದ್ದಾರೆ. ಆರ್ಯ ಅವರು, ಕರ್ನಾಟಕದ ತುಮಕೂರು ಜಿಲ್ಲೆಯ ಮೂಲದವರಾಗಿದ್ದು, ಕೆನಡಾಕ್ಕೆ ತೆರಳುವ ಮೊದಲು ಧಾರವಾಡದಲ್ಲಿ  ಎಂಬಿಎ ಪದವಿ ಪಡೆದಿದ್ದರು. ಇತ್ತೀಚೆಗೆ ಕೆನಡಾದ ಪ್ರಧಾನಿ ಜಸ್ಟಿನ್ ಟ್ರುಡೊ ರಾಜೀನಾಮೆ ನೀಡುವುದಾಗಿ ಘೋಷಿಸಿದರು ಆದರೆ ನೂತನ ನಾಯಕನನ್ನು ಆಯ್ಕೆ ಮಾಡುವವರೆಗೆ ಹುದ್ದೆಯಲ್ಲಿ ಉಳಿಯುವುದಾಗಿ ಅವರು ತಿಳಿಸಿದ್ದರು.

**<><*<><>*><>**

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್' ಮೂಲಕ ಈ ತಿಂಗಳ ೧೯ರ ಭಾನುವಾರದಂದು ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಚಿಂತನೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್ ಕಾರ್ಯಕ್ರಮದ ೧೧೮ನೇ ಆವೃತ್ತಿಯಾಗಿದೆ. ಸಾರ್ವಜನಿಕರು ತಮ್ಮ ಸಲಹೆ, ಸೂಚನೆಗಳನ್ನು ಉಚಿತ ದೂರವಾಣಿ ಸಂಖ್ಯೆ ೧೮೦೦-೧೧-೭೮೦೦ಗೆ ಕರೆ ಮಾಡಿ ತಿಳಿಸಬಹುದಾಗಿದೆ.  ಇದಲ್ಲದೇ ಸಾರ್ವಜನಿಕರು ನರೇಂದ್ರ ಮೋದಿ ಆಪ್ ಅಥವಾ ಮೈ ಗೌವ್ ಓಪನ್ ಫೋರಂ ಮೂಲಕ ಆನ್‌ಲೈನ್‌ನಲ್ಲಿ ಅಭಿಪ್ರಾಯಗಳನ್ನು ಹಂಚಿಕೊಳ್ಳಬಹುದಾಗಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು  <>*><**